# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈವಿ:UG:2025-26/1481 ದಿನಾಂಕ:12.08.2025

## ಸುತ್ತೋಲೆ

ವಿಷಯ:- ರಾಜ್ಯ ಶಿಕ್ಷಣ ನೀತಿಯ 2ನೇ ವರ್ಷದ 3 ಮತ್ತು 4 ನೇ ಸೆಮಿಸ್ಟರ್‌ನ ಸ್ನಾತಕ ಪದವಿಯ ಪಠ್ಯಕ್ರಮವನ್ನು ಸಿದ್ದಪಡಿಸಿ ಅತಿ ತುರ್ತಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವ ಕುರಿತು.

ಉಲ್ಲೇಖ:- 1. ವಿವಿ ಅಧಿಸೂಚನೆ ಪತ್ರಸ ಸಂಖ್ಯೆ: ತು.ವಿ:ಶೈ.ವಿ:ಪ್ರ.ಮಿ:2025-26/642 ದಿನಾಂಕ:17.06.2025.

2. ಸಂಖ್ಯೆ:ತುವಿ:ಶೈವಿ:UG:2025-26/1299 ದಿನಾಂಕ:04.08.2025

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕ ಪದವಿಯ 2ನೇ ವರ್ಷದ 3 ಮತ್ತು 4ನೇ ಸೆಮಿಸ್ಟರ್‌ನ ಪಠ್ಯಕ್ರಮ ಸಿದ್ದಪಡಿಸಿ ಸಲ್ಲಿಸಲು ಉಲ್ಲೇಖಿತ ಪತ್ರಗಳಲ್ಲಿ ಹಲವು ಬಾರಿ ತಿಳಿಸಿದ್ದರೂ ಸಹ ಬಹುತೇಕ ಅಧ್ಯಯನ ಮಂಡಳಿಗಳು ಇಲ್ಲಿಯವರೆವಿಗೂ ಪಠ್ಯಕ್ರಮಗಳನ್ನು ಸಿದ್ದಪಡಿಸಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಿರುವುದಿಲ್ಲ.

ಆದ್ದರಿಂದ ವಿಶ್ವವಿದ್ಯಾನಿಲಯದ 2025-26ನೇ ಶೈಕ್ಷಣಿಕ ವರ್ಷದ ವೇಳಾ ಪಟ್ಟಿಯಂತೆ ಸ್ನಾತಕ ಪದವಿಯ ತರಗತಿಗಳು ದಿನಾಂಕ:18.08.2025ರಂದು ಪ್ರಾರಂಭವಾಗುವುದರಿಂದ ಅಧ್ಯಯನ ಮಂಡಳಿಯ ಅಧ್ಯಕ್ಷರುಗಳು ಕೂಡಲೇ ಸ್ನಾತಕ ಪದವಿಯ ದ್ವಿತೀಯ ವರ್ಷದ 3ನೇ ಮತ್ತು 4ನೇ ಸೆಮಿಸ್ಟರ್‌ಗೆ ಸಂಬಂಧಿಸಿದಂತೆ, ಪಠ್ಯಕ್ರಮವನ್ನು ಸಿದ್ದಪಡಿಸಿ ತುರ್ತಾಗಿ ಸಲ್ಲಿಸುವುದು. ಸಲ್ಲಿಸದಿದ್ದಲ್ಲಿ ಅಧ್ಯಯನ ಮಂಡಳಿಯ ಅಧ್ಯಕ್ಷರುಗಳೇ ನೇರ ಹೊಣೆಗ್ತಾರರಾಗಿರುತ್ತೀರಿ ಈ ಸಂಬಂಧ ಕಾಲೇಜುಗಳ ಪ್ರಾಂಶುಪಾಲರುಗಳು ಪಠ್ಯಕ್ರಮಗಳ ಬಗ್ಗೆ ಕೋರಿದಲ್ಲಿ ನೀವೇ ಉತ್ತರಿಸಬೇಕಾಗಿರುತ್ತದೆ ಎಂದು ಈ ಮೂಲಕ ತಿಳಿಸಲಾಗಿದೆ.

೧೨.೦೮.೨೦೨೫

ಕುಲಸಚಿವರು
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಇವರಿಗೆ,

1. ಅಧ್ಯಕ್ಷರು ಮತ್ತು ಸದಸ್ಯರುಗಳು, ವಿವಿಧ ವಿಷಯಗಳ ಸ್ನಾತಕ ಅಧ್ಯಯನ ಮಂಡಳಿಗಳು, ತುಮಕೂರು ವಿಶ್ವವಿದ್ಯಾನಿಲಯ,ತುಮಕೂರು.
2. ಡೀನರು, ಸಂಬಂಧಪಟ್ಟ ವಿಭಾಗ ಅಧ್ಯಯನ ಮಂಡಳಿಯಿಂದ 3 ಮತ್ತು 4ನೇ ಸೆಮಿಸ್ಟರ್‌ನ ಪಠ್ಯಕ್ರಮ ಸಿದ್ದಪಡಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಿದೆ.
3. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು – ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು, ಎಲ್ಲಾ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ಇ-ಮೇಲ್ ಕಳುಹಿಸುವುದು.

ಪ್ರತಿಗಳು:

1. ಪ್ರಾಂಶುಪಾಲರುಗಳು ಎಲ್ಲಾ ಸಂಯೋಜಿತ /ಘಟಕ /ಸ್ವಾಯತ್ತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಚೇರಿ ಪ್ರತಿ.